ಇ) ಹೌದು.

ಈ) ಕೂಡ್ಲಿ ಕ್ಷೇತ್ರವನ್ನು ಪ್ರವಾಸಿ ತಾಣವನ್ನಾಗಿ ಗುರುತಿಸಲಾಗಿದ್ದು ಇದಕ್ಕೆ ಪ್ರಚಾರವನ್ನು ನೀಡಲಾಗುತ್ತಿದೆ.

ಧ್ವನಿ ಮತ್ತು ಬೆಳಕು ಯೋಜನೆಯಲ್ಲಿ ಬಿಡುಗಡೆಯಾದ ಅನುದಾನ

136 (376) ಮಾರಿಹಾಳ್ ಸುರೇಶ್ ಶಿವರುದ್ರಪ್ಪ (ಕಿತ್ತೂರು): ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಿತ್ತೂರು ರಾಣಿ ಚೆನ್ನಮ್ಮ ಪಟ್ಟಣಕ್ಕೆ 2008–09ನೇ ಸಾಲಿನಿಂದ ಹಾಲಿ 2010–11ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ಹಾಗೂ ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಹಾಗೂ ಖರ್ಚಾದ ಅನುದಾನವೆಷ್ಟು; (ವಿವರ ನೀಡುವುದು)

ಆ) ಪ್ರವಾಸೋದ್ಯಮ ಇಲಾಖೆಯಲ್ಲಿ "ಧ್ವನಿ ಮತ್ತು ಬೆಳಕು" ಯೋಜನೆಯಲ್ಲಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು;

ಇ) "ಧ್ವನಿ ಮತ್ತು ಬೆಳಕು" ಯೋಜನೆ ಅಡಿಯಲ್ಲಿ ಇದುವರೆವಿಗೂ ಕಾಮಗಾರಿ ಪ್ರಾರಂಭಿಸದೇ ಇರಲು ಕಾರಣವೇನು; ಹಾಗಿದ್ದಲ್ಲಿ ಈ ಕಾಮಗಾರಿಯನ್ನು ಎಂದಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಜಿ. ಜನಾರ್ದನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು):

ಅ) ಕಿತ್ತೂರು ರಾಣಿ ಚೆನ್ನಮ್ಮ ಪಟ್ಟಣಕ್ಕೆ 2008–09 ರಿಂದ 2010–11ನೇ ಸಾಲಿನವರೆಗೆ ಕೇಂದ್ರ ಸರ್ಕಾರದ ಪ್ರವಾಸೋದ್ಯಮ ಮಂತ್ರಾಲಯದಿಂದಾಗಲಿ ಅಥವಾ ರಾಜ್ಯ ಪ್ರವಾಸೋದ್ಯಮ ಇಲಾಖೆಯಿಂದಾಗಲಿ ಯಾವುದೇ ಅನುದಾನ ಬಿಡುಗಡೆ ಮಾಡಿರುವುದಿಲ್ಲ.

ಆ) ಕಿತ್ತೂರು ಕೋಟೆ ಪ್ರದೇಶದಲ್ಲಿ ಧ್ವನಿ ಮತ್ತು ಬೆಳಕು ಯೋಜನೆಯನ್ನು ರೂ. 198.44 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳುತ್ತಿದೆ. ಈ ಯೋಜನೆಗಳಿಗಾಗಿ ರೂ. 120.00 ಲಕ್ಷಗಳನ್ನು ಅನುಷ್ಠಾನ ಅಧಿಕಾರಿಯಾದ ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಟಿ.ಡಿ.ಸಿ.ಯವರಿಗೆ ಬಿಡುಗಡೆ ಮಾಡಲಾಗಿದೆ.

ಇ) ಈ ಯೋಜನೆಯ ಟೆಂಡರ್ ಅಂತಿಮಗೊಳಿಸಲಾಗಿದೆ. ಸದರಿ ಯೋಜನೆಯ ಅನುಷ್ಠಾನಕ್ಕೆ ರಾಜ್ಯ ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ಇಲಾಖೆಯಿಂದ ಒಪ್ಪಿಗೆ ನಿರೀಕ್ಷಿಸಿದೆ. ಸದರಿ ಇಲಾಖೆಯಿಂದ ಒಪ್ಪಿಗೆ ದೊರಕಿದ ಕೂಡಲೇ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.